ಹಾಗೂ ಗದ್ದಿಗೌಡರ್ ಸಮಿತಿಗಳು ಕೆಲವು ತಾಲ್ಲೂಕುಗಳ ರಚನೆಯ ಬಗ್ಗೆ ಮಾಡಿದ ಸೂಚನೆಗಳು ಕೂಡ ಜಾರಿಗೆ ಬರಲಿಲ್ಲ ಆದರೆ ಇತ್ತೀಚೆಗೆ 2001 ರಲ್ಲಿ ಬೆಂಗಳೂರು ಪೂರ್ವ ತಾಲ್ಲೂಕನ್ನು ಮಾತ್ರ ರಚಿಸಲಾಗಿದೆ

ಆ) ಸರ್ಕಾರವು ರಾಜ್ಯದಲ್ಲಿ ಹೊಸ ತಾಲ್ಲೂಕುಗಳನ್ನು ರಚಿಸುವ ಬಗ್ಗೆ ಪರಿಶೀಲಿಸುತ್ತಿದೆ ಈ ಬಗ್ಗೆ ತಜ್ಞರ ಸಮಿತಿಯನ್ನು ನೇಮಿಸಿ ಅದರ ವರದಿ ಬಂದ ನಂತರ ಅದನ್ನು ಸಮಗ್ರವಾಗಿ ಪರಿಶೀಲಿಸಿದ ನಂತರ ಹೊಸ ತಾಲ್ಲೂಕುಗಳ ರಚನೆ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುವುದು

ಇ) ತಜ್ಞರ ಸಮಿತಿಯನ್ನು ನೇಮಿಸಿ ಅದರ ವರದಿ ಬಂದ ನಂತರ ಪರಿಶೀಲಿಸಿ ನಿರ್ಧರಿಸಲಾಗುವುದು

ಈ) ಮೇಲೆ (ಇ) ನಲ್ಲಿನ ಉತ್ತರದಿಂದ ಉದ್ಭವಿಸುವುದಿಲ್ಲ

1431 ಶ್ರೀ ಲಾಲಾಜಿ ಆರ್ ಮೆಂಡನ್ (ಕಾಪು) – ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ವಿಸ್ತಾರಗೊಂಡ ಕಾಪು ವಿಧಾನ ಸಭಾ ಕ್ಷೇತ್ರದ ಜನಸಂಖ್ಯೆಯನ್ನು ಕಂದಾಯ ಗ್ರಾಮವಾರು ಜಾತಿವಾರು ಪಟ್ಟಿಯನ್ನು ನೀಡಲಾಗುವುದೆ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)

ಅ) ಜಾತಿವಾರು ಪಟ್ಟಿಯನ್ನು ಮಾಡಲಾಗುವುದಿಲ್ಲ ವಯಸ್ಕರ ಮತದಾರರ ಪಟ್ಟಿಯನ್ನು ಮಾಡಲಾಗುವುದು

ಕರ್ನಾಟಕ ವಿಧಾನ ಸಭೆ

1044 ಶ್ರೀ ಗೋಪಾಲ ಪೂಜಾರಿ ಕೆ – ಮಾನ್ಯ ರೇಷ್ಮೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೇಷ್ಮೆ ಇಲಾಖೆಯಲ್ಲಿ 10 ವರ್ಷ ಸೇವೆ ಸಲ್ಲಿಸಿದ್ದ 'ಡಿ' ಮತ್ತು 'ಸಿ' ದರ್ಜೆಯ ನೌಕರರನ್ನು ಖಾಯಂಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ,

ಆ) ಹಾಗಿದ್ದಲ್ಲಿ ಈ ನೌಕರರನ್ನು ಸಂಖ್ಯಾತಿರಿಕ್ತ ನೌಕರರೆಂದು ಪರಿಗಣಿಸಿ 'ಸಿ' ಮತ್ತು 'ಡಿ' ದರ್ಜೆ ನೌಕರರಾಗಿ ಕಾರ್ಯ ನಿರ್ವಹಿಸುತ್ತಿದ್ದು, ಸದರಿ ನೌಕರರನ್ನು ಬೇರೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ ಮರು ನಿಯೋಜನೆಗೊಳಿಸಲು ಸರ್ಕಾರ ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಿರುವುದು ನಿಜವೇ,

ಇ) ಈ ನೌಕರರನ್ನು ಬೇರೆ ಇಲಾಖೆಗೆ ವಿಲೀನಗೊಳಿಸುವ ಪ್ರಕ್ರಿಯೆ ವಿಳಂಬವಾಗಿರುವುದರಿಂದ 'ಸಿ' ದರ್ಜೆ ನೌಕರರಿಗೆ ಕಾಲಮಿತಿ ಬಡ್ತಿಯನ್ನು ಮತ್ತು ಜೇಷ್ಠತೆಯನ್ನು ನಿಲ್ಲಿಸಿರುವುದರಿಂದ ಈ ನೌಕರರಿಗೆ ಅನ್ಯಾಯವಾಗುವುದಿಲ್ಲವೇ,

ಈ) ಈ ನೌಕರರಿಗೆ ಆಗುವ ಅನ್ಯಾಯವನ್ನು ತಡೆಯಲು ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳುವುದು?

ಎಸ್ ಶಿವಣ್ಣ (ಮಾನ್ಯ ರೇಷ್ಮೆ ಸಚಿವರು) –

ಅ) ಹೌದು ರೇಷ್ಮೆ ಇಲಾಖೆಯಲ್ಲಿ 01/07/1984 ಕ್ಕಿಂತ ಹಿಂದೆ ದಿನಗೂಲಿ ನೌಕರರಾಗಿ ಸೇವೆ ಸಲ್ಲಿಸುತ್ತಿದ್ದವರನ್ನು ಸರ್ಕಾರದ ಆದೇಶ ಸಂಖ್ಯೆ ಡಿಪಿಎಆರ್ 2 ಎಸ್‌ಎಲ್‌ಸಿ 90 ದಿನಾಂಕ 06/08/1990ರ ಮೇರೆಗೆ ಸಂಖ್ಯಾತಿರಿಕ್ತ 'ಸಿ' ಮತ್ತು 'ಡಿ' ದರ್ಜೆ ನೌಕರರನ್ನಾಗಿ ಸೇವೆಯಲ್ಲಿ ಸಕ್ರಮಗೊಳಿಸಲಾಗಿದೆ

ಆ) ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿಯು ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸಂಖ್ಯಾತಿರಿಕ್ತ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರನ್ನು ಖಾಲಿ ಇರುವ ಸಮಾನ ವೃಂದದ ಹಾಗೂ ಸಮಾನ ವೇತನ ಶ್ರೇಣಿಯನ್ನು ಹೊಂದಿರುವ ಹುದ್ದೆಗಳಿಗೆ ಜೇಷ್ಠತೆಯ ಆಧಾರದ ಮೇಲೆ ಮರುವಿನ್ಯಾಸಗೊಳಿಸಲು ಸುತ್ತೋಲೆ ಸಂಖ್ಯೆ ಡಿಪಿಎಆರ್ 6 ಎಸ್‌ಎಲ್‌ಸಿ 96, ದಿನಾಂಕ 12–3–1996 ಮತ್ತು ಸರ್ಕಾರಿ ಆದೇಶ ಸಂಖ್ಯೆ ಡಿಪಿಎಆರ್ 2 ಎಸ್‌ಎಲ್‌ಸಿ 97, ದಿನಾಂಕ 11–4–1997 ರಲ್ಲಿ ಅಧಿಕಾರವನ್ನು ನೀಡಲಾಗಿದೆ

ಇ) ಮರುವಿನ್ಯಾಸ ಪ್ರಕ್ರಿಯೆಯು ಜೇಷ್ಠತೆ ಹಾಗೂ ಬೇರೆ ಇಲಾಖೆಗಳಲ್ಲಿ ಕಾಲ ಕಾಲಕ್ಕೆ ಲಭ್ಯವಾಗುವ ಖಾಲಿ ಹುದ್ದೆಗಳ ಮೇಲೆ ಅವಲಂಬಿತವಾಗಿರುತ್ತದೆ ದಿನಗೂಲಿ ಆಧಾರದ ಮೇಲೆ ಸೇವೆಯಲ್ಲಿದ್ದು, ಸರ್ಕಾರಿ ಆದೇಶ ಸಂಖ್ಯೆ.ಡಿಪಿಎಆರ್ 2 ಎಸ್‌ಎಲ್‌ಸಿ

90, ದಿನಾಂಕ 6–8–90ರ ಪ್ರಕಾರ ಸಂಖ್ಯಾತಿರಿಕ್ತ ಹುದ್ದೆಗಳಲ್ಲಿ ಸಕ್ರಮಗೊಂಡು ಆ ಹುದ್ದೆಗಳಲ್ಲಿ ಸಲ್ಲಿಸಿದ ಸೇವೆಯನ್ನು ಜೇಷ್ಠತೆಗಾಗಿ ಪರಿಗಣಿಸಲು ಅವಕಾಶವಿರುವುದಿಲ್ಲ

ಈ) ಪ್ರಶ್ನೆ 'ಆ' ಮತ್ತು 'ಇ' ಗೆ ನೀಡಿದ ಉತ್ತರ ಅನ್ವಯವಾಗುತ್ತದೆ

ಕರ್ನಾಟಕ ವಿಧಾನ ಸಭೆ

1190 ಶ್ರೀ ಹೆಚ್ ಎಸ್ ಶಂಕರ ಲಿಂಗೇಗೌಡ (ಚಾಮರಾಜ) – ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ಜಿಲ್ಲೆಯಾದ್ಯಂತ ಪರಿಸರ ಮಾಲಿನ್ಯಕ್ಕೆ ಸಂಬಂಧಪಟ್ಟಂತೆ ಬಂದಿರುವ ದೂರುಗಳು ಎಷ್ಟು,

ಆ) ಈ ದೂರುಗಳ ಬಗ್ಗೆ ಇಲಾಖೆ ಯಾವ ಯಾವ ಕ್ರಮಕೈಗೊಂಡಿದೆ,

ಇ) ಮೈಸೂರು ಜಿಲ್ಲೆಯಾದ್ಯಂತ ಪರಿಸರ ಮಾಲಿನ್ಯ ತಡೆ/ನಿಯಂತ್ರಣಕ್ಕೆ ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ?

ಸಿ ಚೆನ್ನಿಗಪ್ಪ (ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು) –

ಅ) ಮೈಸೂರು ಜಿಲ್ಲೆಯಾದ್ಯಂತ ದಿನಾಂಕ 1–4–06 ರಿಂದ 31–3–07 ರವರೆಗೆ ಪರಿಸರ ಮಾಲಿನ್ಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ನೇರ ವ್ಯಾಪ್ತಿಯಲ್ಲಿ 32 ದೂರುಗಳು ಸ್ವೀಕೃತವಾಗಿರುತ್ತದೆ

ಆ) ಪರಿಸರ ನಿಯಮಗಳನ್ನು ಉಲ್ಲಂಘಿಸಿದ ಪ್ರಕರಣಗಳಲ್ಲಿ ಸಂಬಂಧಿಸಿದ ವಿರುದ್ಧ ಕ್ರಮ ಕೈಗೊಳ್ಳಲು ಜಲ (ಮಾಲಿನ್ಯ ನಿವಾರಣೆ ಹಾಗೂ ನಿಯಂತ್ರಣ) ಕಾಯ್ದೆ, 1974 ಹಾಗೂ ವಾಯು (ಮಾಲಿನ್ಯ ನಿವಾರಣೆ ಹಾಗೂ ನಿಯಂತ್ರಣ) ಕಾಯ್ದೆ, 1981 ಅಡಿಯಲ್ಲಿ ಕ್ರಮ ಜರುಗಿಸಲು ಶಾಸನ ಬದ್ಧ ಸಂಸ್ಥೆಯಾದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಗೆ ಅಧಿಕಾರ ಪ್ರದತ್ತವಾಗಿರುತ್ತದೆ ದೂರುಗಳಿಗೆ ಸಂಬಂಧಿಸಿದಂತೆ ಸದರಿ ಕಾಯ್ದೆ ಗಳಡಿಯಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಕ್ರಮ ಕೈಗೊಂಡಿದ್ದು ವಿವರಗಳನ್ನು ಅನಬಂಧ–1ರಲ್ಲಿ ಒದಗಿಸಿದೆ